5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ದ.ಕ., ಮಂಗಳೂರು,
ಕಾರ್ಯನಿರ್ವಹಣೆ, ಪುತ್ತೂರು, ದ.ಕ.

**ಸೆಷನ್ಸ್ ಕೇಸ್ ನಂಬ್ರ 5017/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಸುರೇಶ್ ಕೆ. | ಪ್ರಾಸಾಃ 14 |
| ತಂದೆಯ ಹೆಸರು | : | ವಸಂತ ಪೂಜಾರಿ | ಚಾಸಾಃ 18 |
| ಪ್ರಾಯ | : | 33 ವರ್ಷ | ದಿನಾಂಕಃ **24.10.2024** ರಂದು ಸಾಕ್ಷಿದಾರರಿಗೆ ಪ್ರಮಾಣವಚನ ಬೋಧಿಸಲಾಯಿತು. |
| ಉದ್ಯೋಗ | : | ಕೃಷಿ | |
| ವಾಸಸ್ಥಳ | : | ಕುದ್ಕಾಡಿ ಮನೆ, ಪಡುವನ್ನೂರು ಗ್ರಾಮ, ಪುತ್ತೂರು ತಾಲೂಕು. | |

ಮುಖ್ಯ ವಿಚಾರಣೆಃ ಮಾನ್ಯ ಸರಕಾರಿ ಅಭಿಯೋಜಕರಿಂದಃ

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಸಾಕ್ಷಿಯು ಸದರಿ ದಾಖಲೆಯಲ್ಲಿರುವ ತನ್ನ ಸಹಿಯನ್ನು ಗುರುತಿಸಿದ್ದು, ಸದರಿ ದಾಖಲೆಯನ್ನು ನಿಶಾನೆ ಪಿ-20 ಹಾಗೂ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-20(ಬಿ) ಎಂದು ಗುರುತಿಸಲಾಯಿತು. ಸದರಿ ದಾಖಲೆಗೆ ನಾನು ಪುತ್ತೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ-20 ರಲ್ಲಿ ಏನು ಬರೆದಿರುತ್ತಾರೆ ಎಂಬುದರ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಅದನ್ನು ಓದಿ ನೋಡಿರುವುದಿಲ್ಲ ಮತ್ತು ಅದೇ ರೀತಿ ಪೊಲೀಸರಿಗೆ ನನಗೆ ಅದನ್ನು ಓದಿ ತಿಳಿಸಿರುವುದಿಲ್ಲ.

(ಈ ಹಂತದಲ್ಲಿ ಸರಕಾರಿ ಅಭಿಯೋಜಕರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಕಡತವನ್ನು ಪರಿಶೀಲಿಸಿ, ಸರಕಾರಿ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ಸರಕಾರಿ ಅಭಿಯೋಜಕರಿಂದಃ

2. ದಿನಾಂಕ 20.01.2016 ರಂದು ನಾನು ಮಾನ್ಯ ನ್ಯಾಯಾಲಯದ ಆದೇಶದಂತೆ ಪುತ್ತೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ನನ್ನ ಮತ್ತು ಚಾಸಾ.17 ರವರ ಸಮಕ್ಷಮದಲ್ಲಿ ಕೃತ್ಯಕ್ಕೆ ಉಪಯೋಗಿಸಿದ ಪ್ರಾಸಾ.6 ರವರ ಮಾಲೀಕತ್ವದ ಜೀಪನ್ನು ನಿಶಾನೆ ಪಿ-20 ರಂತೆ ಸ್ವತ್ತು ಬಿಡುಗಡೆ ಮಹಜರು ಮುಖೇನ ಪ್ರಾಸಾ.6 ರವರ ವಶಕ್ಕೆ ನೀಡಿರುತ್ತಾರೆ ಎಂದರೆ ಸರಿಯಲ್ಲ. ನಾನು ನಿಪಿ-20 ನ್ನು ಓದಿ ನೋಡಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಜೀಪು ನಿಶಾನೆ ಪಿ-13 ರಲ್ಲಿರುವ ಛಾಯಾಚಿತ್ರದಲ್ಲಿ ಕಂಡು ಬರುವ ಜೀಪು ಆಗಿರುತ್ತದೆ ಎಂದರೆ ಸರಿಯಲ್ಲ.

3. ಪ್ರಸ್ತುತ ಪ್ರಾಸಾ.2 ರವರು ಮೃತಪಟ್ಟಿದ್ದಾರೆ. ಪ್ರಾಸಾ.2 ರವರು ಮೃತಪಟ್ಟಿದ್ದರಿಂದ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ **1** ಮತ್ತು **2**ನೇ ಆರೋಪಿತರ ಪರ ಶ್ರೀ ಎಂ.ವಿ.ಜಿ. ವಕೀಲರಿಂದಃ

(ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.)

(ಸಾಕ್ಷಿದಾರರ ಹೇಳಿಕೆಯಂತೆ ನನ್ನ ಉಕ್ತಲೇಖನ ರೀತ್ಯಾ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದ.ಕ., ಮಂಗಳೂರು, ಕಾರ್ಯನಿರ್ವಹಣೆಃ ಪುತ್ತೂರು.